ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಇಂಥಹ ಯಾವುದೇ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಅಕ್ರಮ ಸಕ್ರಮ ಯೋಜನೆಯಲ್ಲಿ ಭೂ ಮಂಜೂರಾತಿ

649 (425) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ):– ಮಾನ್ಯ ಕಂದಾಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ನಗರ ಪರಿಮಿತಿಯಿಂದ ಈ ಹಿಂದೆ 18 ಕಿ.ಮೀ. ನಂತರ ಬರುವ ಅಕ್ರಮ ಸಾಗುವಳಿ ಜಮೀನುಗಳನ್ನು ಸಕ್ರಮ ಮಾಡುವ ಆದೇಶವನ್ನು ಬದಲಾವಣೆ ಮಾಡಿ 25 ಕಿ.ಮೀ.ವರೆಗೆ ವಿಸ್ತರಿಸಿರುವುದರಿಂದ ಹಳೇ ಪ್ರಕರಣಗಳನ್ನು ಯಾವ ರೀತಿ ಬಗೆಹರಿಸಲಾಗುವುದು ಹಾಗೂ ಯಾವ ರೀತಿ ಪರಿಗಣನೆಗೆ ತೆಗೆದುಕೊಳ್ಳಲಾಗುವುದು ;

ಆ) ಸುಮಾರು 30 ರಿಂದ 40 ವರ್ಷಗಳಿಗೂ ಹೆಚ್ಚು ಕಾಲದಿಂದ ಅಕ್ರಮ ಜಮೀನುಗಳನ್ನು ಸಾಗುವಳಿ ಮಾಡುತ್ತಿರುವ ರೈತರಿಗೆ ಈ ಹೊಸ ಆದೇಶದಿಂದ ಅನ್ಯಾಯವಾಗುವುದಿಲ್ಲವೆ ;

ಇ) ಬಾಕಿ ಇರುವ ಅಕ್ರಮ ಸಕ್ರಮ ಅರ್ಜಿಯನ್ನು ಹಳೆಯ ಆದೇಶದಲ್ಲಿ ತೀರ್ಮಾನ ತೆಗೆದುಕೊಳ್ಳಲಾಗುವುದೋ ಅಥವಾ ಹೊಸ ಆದೇಶದಂತೆ ತೀರ್ಮಾನ ತೆಗೆದುಕೊಳ್ಳಲಾಗುವುದೋ (ಪೂರ್ಣ ಮಾಹಿತಿ ಒದಗಿಸುವುದು) ?

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಕರ್ನಾಟಕ ಭೂ ಕಂದಾಯ ಕಾಯ್ದೆಯ ಕಲಂ 94ಎ(4) ರನ್ವಯ ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ಸ್ ಕಾಯ್ದೆ 1976ರ ಅಡಿಯಲ್ಲಿನ ಬೆಂಗಳೂರು ನಗರ ಪರಿಮಿತಿಯಿಂದ 18 ಕಿ.ಮೀ. ಅಂತರದಲ್ಲಿನ ಸರ್ಕಾರಿ ಜಮೀನುಗಳಲ್ಲಿನ ಅನಧಿಕೃತ

ಸಾಗುವಳಿಯನ್ನು ಸಕ್ರಮಗೊಳಿಸಿ ಮಂಜೂರು ಮಾಡಲು ಅವಕಾಶವಿರುವುದಿಲ್ಲ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಯು.ಡಿ.ಡಿ. 92 ಎಮ್.ಎನ್.ವೈ. 2006 ದಿನಾಂಕ : 16–01–2007ರಲ್ಲಿ ವಿಸ್ತರಿಸಿರುವುದರಿಂದ, ಈ ವ್ಯಾಪ್ತಿಯಲ್ಲಿ ಬರುವ ಗೋಮಾಳ ಜಮೀನು ಒಳಗೊಂಡಂತೆ ಸರ್ಕಾರಿ ಜಮೀನುಗಳ ಸಕ್ರಮೀಕರಣ ಕೋರಿ ಸಲ್ಲಿಸಲಾಗಿರುವ ಬಾಕಿ ಅರ್ಜಿಗಳನ್ನು ಕರ್ನಾಟಕ ಭೂ ಕಂದಾಯ ಕಾಯ್ದೆಯ ಕಲಂ 94ಎ(4) ರನ್ವಯ ಪರಿಶೀಲಿಸಿ ಇತ್ಯರ್ಥ ಪಡಿಸಬೇಕಾಗುತ್ತದೆ.

ಆ) ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94ಎ ಮತ್ತು ಬಿ ರಡಿಯಲ್ಲಿ ಸದರಿ ಅರ್ಜಿಗಳನ್ನು ಪರಿಶೀಲಿಸಿ ತೀರ್ಮಾನ ಕೈಗೊಳ್ಳುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಸರ್ಕಾರಿ ಜಾಗಗಳಲ್ಲಿ ಮನೆಗಳನ್ನು ಕಟ್ಟಿಕೊಂಡಿರುವುದನ್ನು ಸಕ್ರಮಗೊಳಿಸುವದು

650 (426) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸರ್ಕಾರಿ ಜಾಗಗಳಲ್ಲಿ ಮನೆಗಳನ್ನು ಕಟ್ಟಿಕೊಂಡು ವಾಸಮಾಡುತ್ತಿರುವ ಕಡು ಬಡವರಿಗೆ ನಿಯಮ 94ಸಿ ಪ್ರಕಾರ ಸಕ್ರಮಗೊಳಿಸಲಾಗುವದೇ ;

ಆ) ಹಾಗಿದ್ದಲ್ಲಿ, ಅನೇಕ ಅನಕ್ಷರಸ್ತರು ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸದೇ ಇರುವುದರಿಂದ ಇಂತಹ ಬಡ ಫಲಾನುಭವಿಗಳಿಗೆ ಅರ್ಜಿ ಹಾಕಲು ಕಾಲಾವಕಾಶ ನೀಡಲಾಗುತ್ತಿದೆಯೇ ;

ಇ) ಹಾಗಿಲ್ಲದಿದ್ದಲ್ಲಿ, ಇಂತಹ ಸುಮಾರು 20 ವರ್ಷಗಳಿಗಿಂತಲೂ ಹೆಚ್ಚು ಕಾಲದಿಂದ ಸರ್ಕಾರಿ ಜಾಗಗಳಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವವರಿಗೆ ಮನೆಗಳನ್ನು ಸಕ್ರಮ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94ಸಿ ಪ್ರಕಾರ ಸರ್ಕಾರಿ